## ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 01 ಇಎಸ್‌ಟಿ [9] 2017/2967

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:08-02-2018.

### ಹಿಂಬರಹ

ಕರ್ನಾಟಕ ಸರ್ಕಾರದ ಅಧಿಸೂಚನೆ: ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಸಿಆಸುಇ 15 ಸೇವನೆ 2017 ಬೆಂಗಳೂರು ದಿನಾಂಕ:16.12.2017ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಚಿತ್ರಕಲಾ ಮಹಾವಿದ್ಯಾಲಯಗಳು ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇಎಸ್‌ಟಿ (1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

KK

Sh-est(9) Endsmnt

CN 18493

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 15 ಸೇವನೆ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:16.12.2017

## ಅಧಿಸೂಚನೆ

ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012, ಇದನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 05.07.2017ರ ಅಧಿಸೂಚನೆ ಸಂಖ್ಯೆ: ಸಿಆಸುಇ 15 ಸೇವನೆ 2017 ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಇದರ ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ:27.07.2017ರ ಕರ್ನಾಟಕ ರಾಜ್ಯಪತ್ರದ ಭಾಗ IV-A ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡವನ್ನು ಪ್ರಕರಣ 8ರೊಂದಿಗೆ ಓದಿಕೊಂಡು ಅದರಲ್ಲಿ ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ರಾಜ್ಯಪತ್ರವನ್ನು ದಿನಾಂಕ:27.07.2017ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು, ಸದರಿ ಕರಡಿನ ಬಗ್ಗೆ ಆಕ್ಷೇಪಣೆ/ಸಲಹೆಗಳು ಸ್ವೀಕೃತವಾಗಿದ್ದು ಅವುಗಳನ್ನು ರಾಜ್ಯ ಸರ್ಕಾರವು ಪರಿಗಣಿಸಿರುವುದರಿಂದ ;

ಈಗ, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ, 14)ರ 3ನೇ ಪ್ರಕರಣದ (1)ನೇ ಉಪ ಪ್ರಕರಣವನ್ನು 8ನೇ ಪ್ರಕರಣದೊಂದಿಗೆ ಓದಿಕೊಂಡಂತೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಎಂದರೆ:-

## ನಿಯಮಗಳು

1. ಶೀರ್ಷಿಕೆ ಮತ್ತು ಪ್ರಾರಂಭ:- (1) ಈ ನಿಯಮಗಳನ್ನು ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) (ತಿದ್ದುಪಡಿ) ನಿಯಮಗಳು, 2017 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ದಿನಾಂಕ: 22.03.2012ರಿಂದ ಜಾರಿಗೆ ಬಂದಿವೆಯೆಂದು ಭಾವಿಸತಕ್ಕದ್ದು.

2...

JD(Ad)/Reg(Ad)

**2. ನಿಯಮ 2ಕ್ಕೆ ತಿದ್ದುಪಡಿ:-** ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012ರ ನಿಯಮ 2ರಲ್ಲಿ,

(ಎ) "ಸರ್ಕಾರವು ನಿಗದಿಪಡಿಸಿರುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು" ಎಂಬ ಪದಗಳ ನಂತರ "ಶೇಕಡಾ 50 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು" ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) "ಐದು ವರ್ಷಗಳ" ಎಂಬ ಪದಗಳ ಬದಲಿಗೆ "ಎಂಟು ವರ್ಷಗಳ" ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

**3. ನಿಯಮ 3ಕ್ಕೆ ತಿದ್ದುಪಡಿ:-** ಸದರಿ ನಿಯಮಗಳ ನಿಯಮ 3 ರಲ್ಲಿ ,-

(ಎ) ಉಪ ನಿಯಮ (1)ರಲ್ಲಿ,-.

(i) "ಐದು ವರ್ಷಗಳ" ಎಂಬ ಪದಗಳ ಬದಲಿಗೆ "ಎಂಟು ವರ್ಷಗಳ" ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

(ii) "ಆರು ವರ್ಷಗಳ" ಎಂಬ ಪದಗಳ ಬದಲಿಗೆ "ಒಂಭತ್ತು ವರ್ಷಗಳ" ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

(ಬಿ) ಉಪ ನಿಯಮ (2)ರಲ್ಲಿ,- "ಐದು ವರ್ಷಗಳ" ಎಂಬ ಪದಗಳ ಬದಲಿಗೆ "ಎಂಟು ವರ್ಷಗಳ" ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Gayathri. N.R
16/2/1

(ಗಾಯತ್ರಿ. ಎಂ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ - ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 1000 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು-ಬಿ)ಗೆ ಕಳುಹಿಸಿಕೊಡಲು ಕೋರಿದೆ.

3..

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು.
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
9. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು.
12. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
13. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
14. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
15. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
16. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
17. ಸಚಿವಾಲಯದ ಎಲ್ಲಾ ಶಾಖೆಗಳು
18. ಸಚಿವ ಸಂಪುಟ ಶಾಖೆ
19. ಪತ್ರಿಕಾ ಪ್ರಕಟಣೆ
20. ವಾರದ ರಾಜ್ಯಪತ್ರ
21. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಮುಖಪತ್ರದೊಂದಿಗೆ)